ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
**KARNATAKA LEGISLATIVE ASSEMBLY RESEARCH AND REFERENCE BRANCH**

ಪತ್ರಿಕಾ ತುಣುಕುಗಳು
**PAPER CLIPPINGS**

20

ಇಲಾಖೆ / ವಿಷಯ : DEPARTMENT / SUBJECT: ಸಂತಾಪ (ಇತರ ರಾಜ್ಯಗಳ ಮಾಹಿತಿ)

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯವಾಣಿ        ದಿನಾಂಕ : DATE : 22/7/2020

## ಮಧ್ಯಪ್ರದೇಶ ರಾಜ್ಯಪಾಲ ಲಾಲ್‌ಜಿ ನಿಧನ

ಭೋಪಾಲ್: ಮಧ್ಯಪ್ರದೇಶ ರಾಜ್ಯಪಾಲ ಲಾಲ್‌ಜಿ ಟಂಡನ್ (85) ಮಂಗಳವಾರ ನಿಧರಾದರು. ವಯೋಸಹಜ ಕಾಯಿಲೆಗಳಿಂದ ಬಳಲುತ್ತಿದ್ದ ಅವರು ಲಖನೌನ ಆಸ್ಪತ್ರೆಯಲ್ಲಿ ಕೊನೆಯುಸಿರೆಳೆದಿದ್ದಾರೆ. ಸಂಜೆ 4ಕ್ಕೆ ಲಖನೌನಲ್ಲೇ ಅಂತ್ಯಕ್ರಿಯೆ ನಡೆಯಿತು. ವರ ಮಗ ಅಶುತೋಷ್ ಟಂಡನ್ ವಿಧಿವಿಧಾನ ನೆರವೇರಿಸಿದರು. ಟಂಡನ್ ನಿಧನಕ್ಕೆ ಸಾವಿಗೆ ಪ್ರಧಾನಿ ನರೇಂದ್ರ ಮೋದಿ ಸೇರಿ ಮುಖಂಡರು ಸಂತಾಪ ಸೂಚಿಸಿದ್ದಾರೆ. ಸತತ 50 ವರ್ಷಗಳ ಕಾಲ ರಾಜಕೀಯ ರಂಗದಲ್ಲಿದ್ದ ಟಂಡನ್, 1978-1984 ಮತ್ತು 1990-1996ರಲ್ಲಿ ಉತ್ತರ ಪ್ರದೇಶದ ವಿಧಾನ ಪರಿಷತ್ತಿನ ಸದಸ್ಯರಾಗಿದ್ದರು. 1996ರಿಂದ 2009ರ ನಡುವೆ ಮೂರು ಬಾರಿ ಶಾಸಕರಾಗಿದ್ದರು. 15ನೇ ಲೋಕಸಭೆಯಲ್ಲಿ ಸದಸ್ಯರಾಗಿದ್ದ ಅವರು, ಬಿಹಾರ ಹಾಗೂ ಮಧ್ಯಪ್ರದೇಶದ ರಾಜ್ಯಪಾಲರಾಗಿ ಸೇವೆ ಸಲ್ಲಿಸಿದ್ದಾರೆ.

